**All India Radio: Bangalore**
**National Bulletin In Kannada**
**19.08.2026 19.35 hrs**

**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಹದಿಮೂರು ಸಾವಿರದ ೪೧ ಕೋಟಿ ರೂಪಾಯಿ ಮೌಲ್ಯದ ರೈಲ್ವೆ ಮತ್ತು ರಸ್ತೆ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ

೨. ಭವಿಷ್ಯದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ಶಾಶ್ವತ ಪರೀಕ್ಷಾ ನಿರ್ವಹಣಾ ವ್ಯವಸ್ಥೆ ಬಲಪಡಿಸುವ ಅಗತ್ಯವಿದೆ - ಸುಪ್ರೀಂಕೋರ್ಟ್ ಅಭಿಮತ

೩. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಆನ್‌ಲೈನ್ ತರಬೇತಿ ಉಪಕ್ರಮ ಅನುಷ್ಠಾನ ಪರಿಶೀಲಿಸಿದ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ

೪. ಟೆಸ್ಟ್ ಕ್ರಿಕೆಟ್: ಶ್ರೀಲಂಕಾ ವಿರುದ್ಧ ಭಾರತ ತಂಡಕ್ಕೆ ಗೆಲುವು

೫. ಎಫ್‌ಐಎಚ್ ವಿಶ್ವಕಪ್ ಹಾಕಿ: ಭಾರತ-ಪಾಕಿಸ್ತಾನ ನಡುವಿನ ಪಂದ್ಯ ಪ್ರಗತಿಯಲ್ಲಿ

---

ನಾಲ್ಕು ರೈಲ್ವೆ ಯೋಜನೆಗಳು ಮತ್ತು ಒಂದು ಹೆದ್ದಾರಿ ಯೋಜನೆ ಸೇರಿದಂತೆ ಐದು ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಇಂದು ಅನುಮೋದನೆ ನೀಡಿದೆ.

ನವದೆಹಲಿಯಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸಚಿವ ಸಂಪುಟ ಇಂದು ೧೩ ಸಾವಿರದ ೪೧ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಅನುಮೋದನೆ ನೀಡಿದೆ ಎಂದು ತಿಳಿಸಿದರು.

ರೈಲ್ವೆಯ ನಾಲ್ಕು ಮಲ್ಟಿಟ್ರ್ಯಾಕ್ ಯೋಜನೆಗಳು ಪಶ್ಚಿಮ ಬಂಗಾಳ, ಒಡಿಶಾ, ತಮಿಳುನಾಡು ಮತ್ತು ಆಂಧ್ರಪ್ರದೇಶದಾದ್ಯಂತ ಎಂಟು ಜಿಲ್ಲೆಗಳನ್ನು ಒಳಗೊಳ್ಳಲಿವೆ. ಈ ಯೋಜನೆಗಳು ಖರಗ್‌ಪುರ ಭದ್ರಕ್ ೪ನೇ ಮಾರ್ಗ, ಭದ್ರಕ್ - ಹರಿದಾಸ್ಪುರ ೪ನೇ ಮಾರ್ಗ, ಗುಮ್ಮಿಡಿಪುಂಡಿ - ಗುಡೂರ್ ೩ನೇ ಮತ್ತು ೪ನೇ ಮಾರ್ಗ ಹಾಗೂ ಕಟಕ್ - ಪರದೀಪ್ ೩ನೇ ಮತ್ತು ೪ನೇ ಮಾರ್ಗಗಳು ಸೇರಿವೆ. ಇದರಿಂದ ಭಾರತೀಯ ರೈಲ್ವೆ ಜಾಲಕ್ಕೆ ಸುಮಾರು ೪೧೦ ಕಿಲೋಮೀಟರ್‌ಗಳು ಸೇರ್ಪಡೆಯಾಗಲಿದೆ ಎಂದು ವಿವರಿಸಿದರು.

ಒಟ್ಟು ಒಂಬತ್ತು ಸಾವಿರದ ೪೫೦ ಕೋಟಿ ರೂಪಾಯಿಗಳ ಅಂದಾಜು ವೆಚ್ಚದೊಂದಿಗೆ, ಯೋಜನೆಗಳನ್ನು ೨೦೩೦-೩೧ ರ ವೇಳೆಗೆ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಇದೇ ವೇಳೆ ಬಿಹಾರದಲ್ಲಿ ಎನ್‌ಎಚ್-೨೨ ರ ಮುಜಫರ್‌ಪುರ-ಸೀತಾಮರ್ಹಿ-ಸೋನ್‌ಬಾರ್ಸಾ ವಿಭಾಗವನ್ನು ನಾಲ್ಕು ಪಥಗಳ ಗುಣಮಟ್ಟಕ್ಕೆ ಮೇಲ್ದರ್ಜೆಗೇರಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ೭೨.೫೮ ಕಿಲೋಮೀಟರ್ ಯೋಜನೆಯನ್ನು ಹೈಬ್ರಿಡ್ ಮಾದರಿಯಲ್ಲಿ ಮೂರು ಸಾವಿರದ ೫೯೦ ಕೋಟಿ ರೂಪಾಯಿಗಳಿಗೂ ಹೆಚ್ಚು ಬಂಡವಾಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

---

ಭವಿಷ್ಯದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎಯನ್ನು ಸುರಕ್ಷಿತ ಮೂಲಸೌಕರ್ಯ, ಮೀಸಲು ಪರೀಕ್ಷಾ ಕೇಂದ್ರಗಳು, ಸೈಬರ್ ಭದ್ರತಾ ವ್ಯವಸ್ಥೆ ಹಾಗೂ ಶಾಶ್ವತ ಪರೀಕ್ಷಾ ನಿರ್ವಹಣಾ ವ್ಯವಸ್ಥೆಯೊಂದಿಗೆ ಬಲಪಡಿಸುವ ಅಗತ್ಯವಿದೆ ಎಂದು ಸುಪ್ರೀಂಕೋರ್ಟ್ ಇಂದು ಪುನರುಚ್ಚರಿಸಿದೆ.

ನೀಟ್-ಯುಜಿ ೨೦೨೪ ಪ್ರಶ್ನೆಪತ್ರಿಕೆ ಸೋರಿಕೆಗೆ ಸಂಬಂಧಿಸಿದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಾಲಯ, ಕೆ.ರಾಧಾಕೃಷ್ಣನ್ ಸಮಿತಿಯ ಶಿಫಾರಸುಗಳನ್ನು ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳ ಕುರಿತು ಪ್ರಮಾಣಪತ್ರ ಸಲ್ಲಿಸುವಂತೆ ಕೇಂದ್ರ ಶಿಕ್ಷಣ ಸಚಿವಾಲಯದ ಕಾರ್ಯದರ್ಶಿಗೆ ನಿರ್ದೇಶನ ನೀಡಿದೆ.

ತಾಂತ್ರಿಕ ಬದಲಾವಣೆಗಳಿಗೆ ಹೊಂದಿಕೊಳ್ಳುವ ಹಾಗೂ ಅಗತ್ಯ ಪರಿಣತಿಯನ್ನು ಉಳಿಸಿಕೊಳ್ಳುವ ಸಾಮರ್ಥ್ಯವಿರುವ ಸದೃಢ ಪರೀಕ್ಷಾ ಸಂಸ್ಥೆಯನ್ನು ದೇಶದಲ್ಲಿ ರೂಪಿಸುವುದು ನ್ಯಾಯಾಲಯದ ಉದ್ದೇಶವಾಗಿದೆ ಎಂದು ತಿಳಿಸಿದೆ.

---

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ಯುವಕರಿಗೆ ಉಚಿತ ಆನ್‌ಲೈನ್ ತರಬೇತಿ ನೀಡುವ ಪ್ರಧಾನ ಮಂತ್ರಿಯವರ ಉಪಕ್ರಮದ ಅನುಷ್ಠಾನವನ್ನು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಇಂದು ಪರಿಶೀಲಿಸಿದರು.

ಈ ವೇಳೆ ಉನ್ನತ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳಿಂದ ಅವರು ಮಾಹಿತಿ ಪಡೆದರು.

ಆನ್‌ಲೈನ್ ತರಬೇತಿಯು ದೇಶಾದ್ಯಂತ ವಿದ್ಯಾರ್ಥಿಗಳಿಗೆ ಪ್ರವೇಶಿಸಬಹುದಾದ ಉತ್ತಮ ಗುಣಮಟ್ಟದ ಕಲಿಕಾ ವಿಷಯ, ತಜ್ಞರ ಮಾರ್ಗದರ್ಶನ ಮತ್ತು ರಚನಾತ್ಮಕ ತಯಾರಿ ತಂತ್ರಗಳನ್ನು ನೀಡುವ ಮೂಲಕ ದೃಢವಾದ ರಾಷ್ಟ್ರೀಯ ವೇದಿಕೆಯನ್ನು ನಿರ್ಮಿಸುವತ್ತ ಗಮನಹರಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

---

ತಂತ್ರಜ್ಞಾನ, ಮಾಧ್ಯಮ, ಅರ್ಥವ್ಯವಸ್ಥೆ ಮತ್ತು ಸಾರ್ವಜನಿಕ ನೀತಿ ಕ್ಷೇತ್ರಗಳು ವೇಗವಾಗಿ ಬದಲಾಗುತ್ತಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಭಾರತೀಯ ಮಾಹಿತಿ ಸೇವೆ ಮತ್ತು ಭಾರತೀಯ ಸಂಖ್ಯಾಶಾಸ್ತ್ರ ಸೇವೆಯ ತರಬೇತಿನಿರತ ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಅವರು, ಅಧಿಕಾರಿಗಳು ನಿರ್ಧಾರಗಳಲ್ಲಿ ವಿವೇಚನೆ, ಕರ್ತವ್ಯದಲ್ಲಿ ಸಹಾನುಭೂತಿ ಹಾಗೂ ಪ್ರಾಮಾಣಿಕತೆಯಲ್ಲಿ ದೃಢತೆ ಕಾಯ್ದುಕೊಳ್ಳಬೇಕು ಎಂದು ಸಲಹೆ ನೀಡಿದರು.

ನ್ಯಾಯ, ವಿನಯ ಮತ್ತು ಸಮರ್ಪಣೆಯಿಂದ ಸೇವೆ ಸಲ್ಲಿಸುವುದು ಅಧಿಕಾರಿಗಳ ಮಹತ್ತರ ಹೊಣೆಗಾರಿಕೆಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

---

ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶವು ಭಾರತದ ಪ್ರಮುಖ ಭಾಗವಾಗಿದೆ ಎಂದು ಅಮೆರಿಕ ರಾಯಭಾರಿ ಸೆರ್ಗಿಯೊ ಗೋರ್ ಹೇಳಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ಭೇಟಿಯಲ್ಲಿರುವ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಇಲ್ಲಿನ ಭದ್ರತೆಯನ್ನು ಸುಧಾರಿಸಲು ಮಹತ್ವದ ಕ್ರಮಗಳನ್ನು ತೆಗೆದುಕೊಂಡಿವೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಶ್ರೀನಗರದಲ್ಲಿ ಸೆರ್ಗಿಯೊ ಗೋರ್ ಅವರು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

---

ವೆಚ್ಚ-ಪರಿಣಾಮಕಾರಿತ್ವವನ್ನು ಕಾಯ್ದುಕೊಳ್ಳುವುದರ ಜೊತೆಗೆ ಉತ್ತಮ ಗುಣಮಟ್ಟದ ಮೂಲಸೌಕರ್ಯ ಒದಗಿಸುವುದು ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಮೂಲಸೌಕರ್ಯ ಅಭಿವೃದ್ಧಿಯ ಗುಣಮಟ್ಟದಲ್ಲಿ ಯಾವುದೇ ರಾಜಿ ಇಲ್ಲ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಸುರಂಗಗಳು ಮತ್ತು ಸೇತುವೆಗಳ ಸಮ್ಮೇಳನ ೨೦೨೬ ರ ನಾಲ್ಕನೇ ಆವೃತ್ತಿ ಉದ್ದೇಶಿಸಿ ಮಾತನಾಡಿದ ಸಚಿವರು, ಉತ್ತಮ ಮೂಲಸೌಕರ್ಯ ಖಚಿತಪಡಿಸಿಕೊಳ್ಳಲು ಮತ್ತು ಅಂತಾರಾಷ್ಟ್ರೀಯ ಮಾನದಂಡಗಳನ್ನು ಪೂರೈಸಲು ದೃಢವಾದ ವಿವರವಾದ ಯೋಜನಾ ವರದಿ-ಡಿಪಿಆರ್ ಅಗತ್ಯವನ್ನು ಒತ್ತಿ ಹೇಳಿದರು.

---

ಗಾಲೆಯಲ್ಲಿ ನಡೆದ ಎರಡು ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ತಂಡ, ಆತಿಥೇಯ ಶ್ರೀಲಂಕಾವನ್ನು ೧೬೫ ರನ್‌ಗಳಿಂದ ಪರಾಭವಗೊಳಿಸಿತು. ಈ ಮೂಲಕ ಭಾರತ ೧-೦ ಅಂತರದ ಮುನ್ನಡೆ ಸಾಧಿಸಿದೆ.

೩೭೨ ರನ್‌ಗಳ ಗುರಿ ಬೆನ್ನಟ್ಟಿದ ಶ್ರೀಲಂಕಾ, ೭೭.೪ ಓವರ್‌ಗಳಲ್ಲಿ ೨೦೬ ರನ್‌ಗಳಿಗೆ ಎಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಇದರಿಂದಾಗಿ ಭಾರತ ಸುಲಭವಾಗಿ ಗೆಲುವು ದಾಖಲಿಸಿತು.

ಭಾರತದ ಪರ, ಮಾನವ್ ಸುತಾರ್ ಆರು ವಿಕೆಟ್‌ಗಳನ್ನು ಕಬಳಿಸಿದರು. ಪ್ರಸಿದ್ಧ್ ಕೃಷ್ಣ ೨ ವಿಕೆಟ್ ಹಾಗೂ ರವೀಂದ್ರ ಜಡೇಜಾ ಮತ್ತು ಮೊಹಮ್ಮದ್ ಸಿರಾಜ್ ತಲಾ ಒಂದು ವಿಕೆಟ್ ಪಡೆದರು.

ಇದಕ್ಕೂ ಮೊದಲು, ಭಾರತ ತಂಡ, ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ೧೯೩ ರನ್‌ಗಳಿಗೆ ಆಲೌಟ್ ಆಗಿ, ಶ್ರೀಲಂಕಾಕ್ಕೆ ೩೭೨ ರನ್‌ಗಳ ಗುರಿ ನೀಡಿತು. ರಿಷಭ್ ಪಂತ್ ೬೯ ಎಸೆತಗಳಲ್ಲಿ ಎಂಟು ಬೌಂಡರಿಗಳು ಮತ್ತು ಎರಡು ಸಿಕ್ಸರ್‌ಗಳೊಂದಿಗೆ ೬೬ ರನ್ ಗಳಿಸುವ ಮೂಲಕ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು. ಅವರು ಟೆಸ್ಟ್ ಕ್ರಿಕೆಟ್‌ನಲ್ಲಿ ೧೦೦ ಸಿಕ್ಸರ್ ಸಿಡಿಸಿದ ಮೊದಲ ಭಾರತೀಯ ಬ್ಯಾಟರ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ದೇವದತ್ ಪಡಿಕ್ಕಲ್ ೪೪ ರನ್ ಗಳಿಸಿದರೆ, ಕೆ.ಎಲ್.ರಾಹುಲ್ ೩೫ ರನ್ ಗಳಿಸಿದರು.

---

ನೆದರ್ಲ್ಯಾಂಡ್ಸ್‌ನ ಆಮ್ಸ್ಟೆಲ್ವೀನ್‌ನಲ್ಲಿ ನಡೆಯುತ್ತಿರುವ ಎಫ್‌ಐಎಚ್ ವಿಶ್ವಕಪ್ ಹಾಕಿ ಪಂದ್ಯಾವಳಿಯ ಪೂಲ್ ಡಿ ವಿಭಾಗದಲ್ಲಿ ಭಾರತ ಇಂದು, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡದೊಂದಿಗೆ ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

---

ಕೋಲ್ಕತ್ತಾದ ನ್ಯೂ ಮಾರ್ಕೆಟ್ ಪ್ರದೇಶದ ಮಿರ್ಜಾ ಗಾಲಿಬ್ ಸ್ಟ್ರೀಟ್‌ನ ಹೋಟೆಲ್‌ನಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ೬ ಮಂದಿ ಮೃತಪಟ್ಟಿರುವ ಪ್ರಕರಣದ ತನಿಖೆಗೆ ಕೋಲ್ಕತ್ತಾ ಪೊಲೀಸರು ೭ ಸದಸ್ಯರ ವಿಶೇಷ ತನಿಖಾ ತಂಡ-ಎಸ್‌ಐಟಿ ರಚಿಸಿದ್ದಾರೆ.

ಡಿಸಿಡಿಡಿ ಸ್ಪರ್ಶ್ ನೀಲಂಗಿ ನೇತೃತ್ವದ ತಂಡ ತನಿಖೆ ನಡೆಸಲಿದೆ. ಘಟನೆಯಲ್ಲಿ ಇಬ್ಬರು ಮಹಿಳೆಯರು ಮತ್ತು ಒಂದು ಮಗು ಸೇರಿದಂತೆ ೬ ಮಂದಿ ಮೃತಪಟ್ಟಿದ್ದಾರೆ. ಗಾಯಗೊಂಡ ೧೭ ಮಂದಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸುಮಾರು ೮೦ ಮಂದಿಯನ್ನು ರಕ್ಷಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಗ್ನಿ ಅವಘಡದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ.

---

ಕೊಲಂಬಿಯಾದಲ್ಲಿ, ಪ್ರಬಲ ಭೂಕಂಪದಿಂದ ಮೃತಪಟ್ಟವರ ಸಂಖ್ಯೆ ೩೧೨ ಕ್ಕೆ ಏರಿಕೆಯಾಗಿದೆ. ಭೂಕಂಪದ ಪರಿಣಾಮವಾಗಿ ೪ ಸಾವಿರದ ೭೧೧ ಜನರು ಗಾಯಗೊಂಡಿದ್ದು, ೨೯೦ ಮಂದಿ ಕಾಣೆಯಾಗಿದ್ದಾರೆ ಎಂದು ವರದಿಯಾಗಿದೆ.

ಸುಮಾರು ೨೭೭ ಕಟ್ಟಡಗಳು ಕುಸಿದಿದ್ದು, ಸುಮಾರು ೩೦ ಸಾವಿರ ಮನೆಗಳು ಹಾನಿಗೊಳಗಾಗಿವೆ. ಅವಶೇಷಗಳ ಅಡಿಯಲ್ಲಿ ಇನ್ನೂ ಸಿಕ್ಕಿಬಿದ್ದಿರುವ ಅಥವಾ ಕಾಣೆಯಾಗಿರುವ ಜನರನ್ನು ಪತ್ತೆಹಚ್ಚಲು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ರಕ್ಷಣಾ ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿವೆ ಎಂದು ಕೊಲಂಬಿಯಾದ ವಿಪತ್ತು ನಿರ್ವಹಣೆಯ ರಾಷ್ಟ್ರೀಯ ಘಟಕ ತಿಳಿಸಿದೆ.

---

ತಮಿಳುನಾಡಿನ ಮಹಾಬಲಿಪುರಂನಲ್ಲಿ ನಾಳೆ ನಡೆಯಲಿರುವ ದಕ್ಷಿಣ ವಲಯ ಮಂಡಳಿ ಸಭೆಯ ಅಧ್ಯಕ್ಷತೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ವಹಿಸಲಿದ್ದಾರೆ.

ಸಭೆಯಲ್ಲಿ ಕರ್ನಾಟಕ, ಆಂಧ್ರಪ್ರದೇಶ, ಕೇರಳ, ತಮಿಳುನಾಡು ಮತ್ತು ತೆಲಂಗಾಣ ಹಾಗೂ ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್, ಲಕ್ಷದ್ವೀಪ ಕೇಂದ್ರಾಡಳಿತ ಪ್ರದೇಶಗಳ ಲೆಫ್ಟಿನೆಂಟ್ ಗವರ್ನರ್‌ಗಳು, ಮುಖ್ಯಮಂತ್ರಿಗಳು ಮತ್ತು ಆಡಳಿತಾಧಿಕಾರಿಗಳು ಭಾಗವಹಿಸಲಿದ್ದಾರೆ.

__________ ಮುಕ್ತಾಯ __________